945 ಶ್ರೀ ಅಮರೇಶ್ (ಮುಳಬಾಗಿಲು) : ಮಾನ್ಯ ಜವಳಿ, ಯುವಜನ ಸೇವಾ ಮತ್ತು ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುಳಬಾಗಿಲು ಪಟ್ಟಣದಲ್ಲಿ ಕ್ರೀಡಾಂಗಣ ವಿಲ್ಲದೆ ತಾಲ್ಲೂಕಿನ ಯುವ ಜನತೆ ಕ್ರೀಡೆಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕ್ರೀಡಾಂಗಣ ನಿರ್ಮಿಸಲು ಸರ್ಕಾರ ಉದ್ದೇಶಿಸಿದೆಯೇ;

ಇ) ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಗೂಳಿಹಟ್ಟಿ ಡಿ. ಶೇಖರ್ (ಜವಳಿ, ಯುವಜನ ಸೇವಾ ಮತ್ತು ಕ್ರೀಡಾ ಸಚಿವರು) :

ಅ) ಮುಳಬಾಗಿಲು ಪಟ್ಟಣದಲ್ಲಿ ತಾಲ್ಲೂಕು ಮಟ್ಟದ ಕ್ರೀಡಾಂಗಣವನ್ನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ಪ್ರೌಢಶಾಲಾ ಕಟ್ಟಡದ ಮಧ್ಯಭಾಗದ 8 ಎಕರೆ 13 ಗುಂಟೆ ನಿವೇಶನದಲ್ಲಿ ನಿರ್ಮಿಸಲಾಗಿದೆ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

951 ಶ್ರೀ ನಾಗೇಂದ್ರ ಬಿ. (ಕೂಡ್ಲಿಗಿ) : ಮಾನ್ಯ ಸಣ್ಣ ನೀರಾವರಿ, ಯೋಜನಾ ಹಾಗೂ ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೂಡ್ಲಿಗಿ ತಾಲ್ಲೂಕಿಗೆ ಕಳೆದ 2 ವರ್ಷಗಳಿಂದ, ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ, ತೆಗೆದುಕೊಂಡ ಕಾಮಗಾರಿಗಳು ಹಾಗೂ ಇದಕ್ಕೆ ಬಿಡುಗಡೆ ಮಾಡಿದ ಅನುದಾನ ಎಷ್ಟು? (ವರ್ಷಾವಾರು ಕಾಮಗಾರಿಗಳ ವಿವರ ನೀಡುವುದು);

ಆ) ಕೂಡ್ಲಿಗಿ ತಾಲ್ಲೂಕು ಅತ್ಯಂತ ಹಿಂದುಳಿದ ತಾಲ್ಲೂಕಾಗಿದ್ದು, ಪ್ರಸಕ್ತ ಸಾಲಿನಲ್ಲಿ ಹೈದರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಹೆಚ್ಚಿನ ಅನುದಾನ ಬಿಡುಗಡೆ ಮಾಡಿ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರ ಉದ್ದೇಶಿಸಿದೆಯೇ? ಇದ್ದಲ್ಲಿ ವಿವರಗಳನ್ನು ನೀಡುವುದು?

ಶ್ರೀ ಗೋವಿಂದ ಎಂ.ಕಾರಜೋಳ (ಸಣ್ಣ ನೀರಾವರಿ, ಯೋಜನಾ ಹಾಗೂ ಸಾಂಖ್ಯಿಕ ಸಚಿವರು) :

ಅ) ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಕಳೆದ 2 ವರ್ಷಗಳಲ್ಲಿ ಕೂಡ್ಲಿಗಿ ತಾಲ್ಲೂಕಿನಲ್ಲಿ ತೆಗೆದುಕೊಂಡ ಕಾಮಗಾರಿಗಳ ಹಾಗೂ ಸದರಿ ತಾಲ್ಲೂಕಿಗೆ ಬಿಡುಗಡೆಯಾದ ಅನುದಾನದ ವಿವರಗಳು ಈ ಕೆಳಗಿನಂತಿವೆ:

(ರೂ.ಲಕ್ಷಗಳಲ್ಲಿ)

2007-08		2008-09	
ಕಾಮಗಾರಿಗಳ ಸಂಖ್ಯೆ	ಬಿಡುಗಡೆ ಮಾಡಿದ ಮೊತ್ತ	ಕಾಮಗಾರಿಗಳ ಸಂಖ್ಯೆ	ಬಿಡುಗಡೆ ಮಾಡಿದ ಮೊತ್ತ
23	90.00	9	80.00

ಆ) ಹೈದ್ರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಸರ್ಕಾರವು 2009-10ನೇ ಸಾಲಿನಲ್ಲಿ ರೂ.2100.00 ಲಕ್ಷ ಅನುದಾನ ಹಂಚಿಕೆ ಮಾಡಿರುತ್ತದೆ. ವಿಭಾಗದ ಎಲ್ಲಾ ತಾಲ್ಲೂಕುಗಳಿಗೆ ಹಂಚಲಾಗುತ್ತದೆ.

527 ಶ್ರೀ ಬಾಲಕೃಷ್ಣ ಹೆಚ್.ಸಿ.(ಮಾಗಡಿ) : ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ವಿಧಾನ ಸಭಾ ಕ್ಷೇತ್ರದಲ್ಲಿರುವ ಸಣ್ಣ ನೀರಾವರಿ ಯೋಜನೆಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು? (ವಿವರ ನೀಡುವುದು);

ಆ) ಇವುಗಳಲ್ಲಿ ಯಾವ ಯಾವ ಕೆರೆಗಳನ್ನು ಪುನಃಶ್ಚೇತನಗೊಳಿಸಲಾಗಿದೆ; ಯಾವ ಯಾವ ಕೆರೆಗಳನ್ನು ಪುನಃಶ್ಚೇತನಗೊಳಿಸಬೇಕಾಗಿದೆ.

ಇ) 2008-09 ಹಾಗೂ 2009-10ನೇ ಸಾಲಿನಲ್ಲಿ ಎಷ್ಟು ಕೆರೆಗಳನ್ನು ಪುನಃಶ್ಚೇತನಗೊಳಿಸಲಾಗಿದೆ; ಉಳಿದ ಕೆರೆಗಳನ್ನು ಯಾವಾಗ ಪುನಃಶ್ಚೇತನ ಗೊಳಿಸಲಾಗುವುದು?

ಶ್ರೀ ಗೋವಿಂದ ಎಂ.ಕಾರಜೋಳ (ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು) :

ಅ) ಮಾಗಡಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಮಾಗಡಿ ತಾಲ್ಲೂಕಿನಲ್ಲಿ 26 ಕೆರೆಗಳು ಇದ್ದು ವಿವರಗಳನ್ನು ಅನುಬಂಧ-1ರಲ್ಲಿ ಲಗತ್ತಿಸಲಾಗಿದೆ.